# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 2152 |
| ಸದಸ್ಯರ ಹೆಸರು | : ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 25.03.2021 |
| ಉತ್ತರಿಸುವ ಸಚಿವರು | : ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು |

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ | ರಾಮನಗರ ಜಿಲ್ಲೆ ಬಿಡದಿ ಹೋಬಳಿ, ಶಾನಮಂಗಲ ಬಿಲ್ಲಕೆಂಪನ ಹಳ್ಳಿ ಮತ್ತು ಬಾಣಂದೂರು ಗ್ರಾಮದಲ್ಲಿ ಅಕ್ರಮವಾಗಿ ಸರಕಾರಿ ಜಮೀನನ್ನು ಒತ್ತುವರಿ ಮಾಡಿ ಈಗಲ್ಟನ್ ರೆಸಾರ್ಟ್‌ಗಳನ್ನು ಅಕ್ರಮವಾಗಿ ನಡೆಸುತ್ತಿದ್ದು, ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗಿರುವ ಕುರಿತು ಇದುವರೆಗೆ ಎಷ್ಟು ದೂರುಗಳು ದಾಖಲಾಗಿವೆ; | ಇಲ್ಲಿಯವರೆಗೆ ಯಾವುದೇ ದೂರುಗಳು ದಾಖಲಾಗಿರುವುದಿಲ್ಲ. |
| ಆ | ಈಗಲ್ಟನ್ ರೆಸಾರ್ಟ್‌ನಲ್ಲಿ ನಡೆಸುತ್ತಿರುವ ಅಕ್ರಮ ವ್ಯವಹಾರಗಳಿಗೆ ಪೊಲೀಸ್ ಇಲಾಖೆಯು ಭಾಗಿಯಾಗಿರುವ ಕುರಿತು ಮಾಧ್ಯಮಗಳಲ್ಲಿ ವರದಿಯಾಗಿದ್ದು, ಈ ಕುರಿತು ಸರ್ಕಾರದ ನಿಲುವೇನು; | ಈಗಲ್ಟನ್ ರೆಸಾರ್ಟ್‌ನಲ್ಲಿ ನಡೆಯುತ್ತಿರುವ ಅಕ್ರಮ ವ್ಯವಹಾರಗಳಿಗೆ ಪೊಲೀಸ್ ಅಧಿಕಾರಿಗಳು ಶಾಮೀಲಾಗಿರುವ ಬಗ್ಗೆ ಯಾವುದೇ ದೂರುಗಳು ಬಂದಿರುವುದಿಲ್ಲ. ಆ ರೀತಿಯ ದೂರುಗಳು ಬಂದರೆ ಅಂತಹ ಪೊಲೀಸ್ ಅಧಿಕಾರಿಗಳ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು. |
| ಇ | ಈ ಅಕ್ರಮ ರೆಸಾರ್ಟ್‌ನಲ್ಲಿ ನಡೆಯುತ್ತಿರುವ ಅಕ್ರಮಗಳಿಗೆ ಸಹಾಯ ಮಾಡುತ್ತಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ಈ ರೆಸಾರ್ಟ್ ಮೇಲೆ ಅಕ್ರಮಗಳ, ಅವ್ಯವಹಾರಗಳ ತನಿಖೆಗಾಗಿ ಇದುವರೆವಿಗೆ ಎಷ್ಟು ಬಾರಿ ಪೊಲೀಸ್ ದಾಳಿಗಳಾಗಿವೆ; ಯಾವ ರೀತಿಯ ಅಕ್ರಮಗಳನ್ನು ಪತ್ತೆ ಹಚ್ಚಲಾಗಿದೆ; ಇದುವರೆಗೆ ಈಗಲ್ಟನ್ ರೆಸಾರ್ಟ್ ಮೇಲೆ ದಾಖಲಾಗಿರುವ ಪ್ರಕರಣಗಳು ಎಷ್ಟು; ಪ್ರಸ್ತುತ ಅವು ಯಾವ ಹಂತದಲ್ಲಿವೆ? | ಅಧಿಕಾರಿಗಳ ವಿರುದ್ಧ ಯಾವುದೇ ದೂರುಗಳು ದಾಖಲಾಗಿರುವುದಿಲ್ಲ.<br><br>ಈಗಲ್ಟನ್ ರೆಸಾರ್ಟ್‌ಗಳ ಅಕ್ರಮಗಳಿಗೆ ಸಂಬಂಧಪಟ್ಟಂತೆ ಒಂದು ಬಾರಿ ದಾಳಿಯನ್ನು ನಡೆಸಿ ಒಂದು ಪ್ರಕರಣವನ್ನು ದಾಖಲು ಮಾಡಲಾಗಿರುತ್ತದೆ.<br><br>ಇದುವರೆವಿಗೆ ಈಗಲ್ಟನ್ ರೆಸಾರ್ಟ್‌ನಲ್ಲಿ 02 ಪ್ರಕರಣಗಳು ದಾಖಲಾಗಿದ್ದು, ಒಂದು ಮನೆ ಜೂಜಾಟದ ಪ್ರಕರಣವಾಗಿದ್ದು, ಮತ್ತೊಂದು ಕೊಲೆ ಯತ್ನ ಪ್ರಕರಣವಾಗಿರುತ್ತದೆ. ಸದರಿ ಎರಡೂ ಪ್ರಕರಣಗಳು ನ್ಯಾಯಾಲಯದ ವಿಚಾರಣಾ ಹಂತದಲ್ಲಿರುತ್ತವೆ. |

**ಹೆಚ್‌ಡಿ 215 ಎಸ್‌ಎಸ್‌ಟಿ 2021**

(ಬಸವರಾಜ ಬೊಮ್ಮಾಯಿ)
ಗೃಹ ಮತ್ತು ಕಾನೂನು, ಸಂಸದೀಯ
ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು